ಆ)1)ಟೆಂಡರು ಕರೆಯಲಾಗಿದೆ.

2) ಸಹಾಯಕ ಕಾರ್ಯನಿರ್ವಾಹಕ ಇಂಜಿನೀಯರ್ ತಾಂತ್ರಿಕ ಉಪ ವಿಭಾಗ (ಪಿಹೆಚ್ಇ) ಧಾರವಾಡ ಇವರಿಗೆ ಕೊಳವೆ ಬಾವಿ ಕೊರೆಯಲು ತಿಳಿಸಲಾಗಿದೆ.

3) ಅಂಗನವಾಡಿ ಕಟ್ಟಡ ನಿರ್ಮಾಣ ಪೂರ್ಣಗೊಂಡಿದೆ.

4) ಕೆಲಸಗಳು ಪ್ರಗತಿಯಲ್ಲಿವೆ.

ಇ)1)ಟೆಂಡರ್ ಒಪ್ಪಿಗೆಯಾದ ಕೂಡಲೇ ಯೋಜನೆಗಳನ್ನು ಪೂರ್ಣಗೊಳಿಸಲಾಗುವುದು.

2) ಶೀಘ್ರವಾಗಿ ಮುಗಿಸಲಾಗುವುದು.

3) ಪೂರ್ಣಗೊಂಡಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

4) ದಿನಾಂಕ 31-3-96ರ ಒಳಗಾಗಿ ಪೂರ್ಣಗೊಳಿಸಲಾಗುವುದು.

ರಟ್ಟೀಹಳ್ಳಿ-ತುಮ್ಮಿನಕಟ್ಟಿ ರಸ್ತೆ ದುರಸ್ತಿ

1731-Ë ಶ್ರೀ ಯು.ಬಿ. ಬಣಕಾರ್ (ಹಿರೇಕೆರೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಟ್ಟೀಹಳ್ಳಿ - ತುಮ್ಮಿನಕಟ್ಟಿ ರಸ್ತೆಯಲ್ಲಿ ರಟ್ಟೀಹಳ್ಳಿಯಿಂದ 4 ಕಿ.ಮೀ. ರಸ್ತೆ ಪೂರಾ ಹಾಳಾಗಿ ಹೋಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ದುರಸ್ತಿ ಮಾಡಲು ಸರ್ಕಾರದವರು ತೆಗೆದುಕೊಂಡಿರುವ ಕ್ರಮವೇನು, ಹಾಗೂ ಯಾವಾಗ ದುರಸ್ತಿ ಮಾಡಲಾಗುತ್ತದೆ?

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಸದರಿ ರಸ್ತೆಯ 4 ಕಿ.ಮೀ. ಉದ್ದದ ಭಾಗವು ಕೆಟ್ಟಿದ್ದು, ವಾಹನಗಳ ಸುಗಮ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈ ಭಾಗದ ರಸ್ತೆಯನ್ನು 1995-96ನೇ ಸಾಲಿನಲ್ಲಿ ಮಳಿಗಾಲದ ನಂತರ ಡಾಂಬರು, ಮಾಡುವ ಪ್ರಸ್ತಾಪವಿರುತ್ತದೆ. ಅಲ್ಲಿಯವರೆವಿಗೂ ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚಿ ರಸ್ತೆಯನ್ನು ಸುಸ್ಥಿತಿಯಲ್ಲಿಡುವಂತೆ ಸೂಚಿಸಲಾಗಿದೆ.

ತಾಲ್ಲೂಕು ಪಂಚಾಯ್ತಿ ಜೀಪ್ ಉಪಯೋಗದ ಬಗ್ಗೆ

2451 - ಡಾ॥ ಯು. ಚಿತ್ತರಂಜನ್ (ಭಟ್ಕಳ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಾಲ್ಲೂಕು ಪಂಚಾಯ್ತಿ ಕಾರ್ಯ ನಿರ್ವಾಹಕ ಅಧಿಕಾರಿಯ ವಾಹನವನ್ನು ತಾಲ್ಲೂಕು ಪಂಚಾಯ್ತಿ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಉಪಯೋಗಿಸುವ ಕುರಿತು ನಿರ್ದಿಷ್ಟ ಸೂಚನೆಗಳನ್ನು ಸರ್ಕಾರದಿಂದ ಕೊಡಲಾಗಿದೆಯೇ? (ಆವರ ವಿವರಗಳೇನು)

ಆ) ಆ ಕ್ಷೇತ್ರದ ವಿಧಾನ ಸಭಾ ಸದಸ್ಯರು ಕ್ಷೇತ್ರದಲ್ಲಿ ಪ್ರವಾಸ ಮಾಡಲು ಈ ವಾಹನ ಉಪಯೋಗಿಸಲು ಏನು ವ್ಯವಸ್ಥೆ ಮಾಡಲಾಗಿದೆ.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

ಅ) ತಾಲ್ಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ವಾಹನಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಈ ಬಗ್ಗೆ ಯಾವ ಸೂಚನೆಗಳನ್ನು ಹೊರಡಿಸಿರುವುದಿಲ್ಲ.